ತೀರ್ಥಹಳ್ಳಿ ಸರ್ಕಾರಿ ಜೂನಿಯರ್ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಜಾಸ್ತಿಯಾಗಿ ಸೌಲಭ್ಯವಿಲ್ಲದೆ ತೊಂದರೆಯಾಗಿರುವುದು.

1696 (2022) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೀರ್ಥಹಳ್ಳಿ ಸರ್ಕಾರಿ ಜೂನಿಯರ್ ಕಾಲೇಜಿಗೆ ಈ ಸಾಲಿನಲ್ಲಿ ಪ್ರವೇಶಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಇದರಲ್ಲಿ ಎಷ್ಟು ಜನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ.

ಆ) ಈ ಸಂಸ್ಥೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಕಟ್ಟಡ ಸ್ಥಳಾವಕಾಶ, ಉಪನ್ಯಾಸಕರು ಮತ್ತು ಪೀಠೋಪಕರಣಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಇದೆಯೇ?

ಇ) ಹಾಗಿದ್ದಲ್ಲಿ ಈ ಸಾಲಿನ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನುಕೂಲ ಮಾಡಿಕೊಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಪ್ರೋ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಪ್ರವೇಶ ಕೋರಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಸಂಖ್ಯೆ : 400. ಪ್ರವೇಶ ನೀಡಲಾದ ವಿದ್ಯಾರ್ಥಿಗಳ ಸಂಖ್ಯೆ : 388.

ಆ) ಹೌದು

ಇ) ಕೊರತೆ ಇರುವ ಮೂರು ಉಪನ್ಯಾಸಕರುಗಳನ್ನು ತಾತ್ಕಾಲಿಕವಾಗಿ ನಿಯೋಜಿಸುವ ಮೂಲಕ ತುಂಬಲಾಗುವುದು. ಉಳಿದ ಕೊರತೆಗಳ ಬಗ್ಗೆ ಸಹ ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದು.

ತೀರ್ಥಹಳ್ಳಿ ತುಂಗಾ ಮಹಾವಿದ್ಯಾಲಯದಲ್ಲಿ ಶುಲ್ಕ ವಿನಾಯಿತಿ ಪಡೆದ ಒಟ್ಟು ವಿದ್ಯಾರ್ಥಿಗಳ ವಿವರ

1697(2078) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕಿನ ತುಂಗಾ ಮಹಾವಿದ್ಯಾಲಯದಲ್ಲಿ ವಿವಿಧ ತರಗತಿಯಲ್ಲಿ ಈ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? ತರಗತಿವಾರು ವಿವರ ನೀಡುವುದು.

ಆ) ಈ ರೀತಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ಕಡಿಮೆ ಆದಾಯ ಮತ್ತು ಪರಿಶಿಷ್ಟ ಜಾತಿ, ವರ್ಗದ ವಿದ್ಯಾರ್ಥಿಗಳಾಗಿದ್ದು ಸರ್ಕಾರಿ ನಿಯಮದಂತೆ ಶುಲ್ಕ ವಿನಾಯ್ತಿ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಡಾ।। ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು):

ಅ) 1110

ತರಗತಿವಾರು ವಿವರ ಈ ಕೆಳಕಂಡಂತಿದೆ

ಕ್ರಮ ಸಂಖ್ಯೆ	ತರಗತಿ	ವಿದ್ಯಾರ್ಥಿಗಳ ಸಂಖ್ಯೆ
1	ಪ್ರಥಮ ಪಿ.ಯು.ಸಿ	156
2	ದ್ವಿತೀಯ ಪಿ.ಯು.ಸಿ	155
3	ಪ್ರಥಮ ಬಿ.ಎ	184
4	ದ್ವಿತೀಯ ಬಿ.ಎ	154